# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು - 572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಶೈವಿ:2018-19: 2066 ದಿನಾಂಕ:06.09.2018

## ಸುತ್ತೋಲೆ

ವಿಷಯ : 2018-19 ನೇ ಶೈಕ್ಷಣಿಕ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳ ಪ್ರವೇಶಾತಿ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಪಡೆಯುವ ಬಗ್ಗೆ.

ಉಲ್ಲೇಖ: 1. ಈ ಕಚೇರಿ ಅಧಿಸೂಚನೆ ಸಂಖ್ಯೆ:ತುವಿ:ಶೈವಿ:2018-19:392 ದಿನಾಂಕ:22.05.2018
2. ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಶೈವಿ:2018-19:1758 ದಿನಾಂಕ:07.08.2018
3. ಈ ಕಚೇರಿ ಅಧಿಸೂಚನೆ ಸಂಖ್ಯೆ:ತುವಿ:ಶೈವಿ:2018-19:583 ದಿನಾಂಕ:08.06.2018

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19 ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕ / ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಮತ್ತು ಅಧ್ಯಾಪಕರು/ಅಧ್ಯಾಪಕೇತರ ವರ್ಗದವರ ಹಾಗೂ ಇನ್ನಿತರೆ ಮಾಹಿತಿಗಳನ್ನು ನಿಗದಿತ ನಮೂನೆಗಳಲ್ಲಿ ನಮೂದಿಸಿ ವಿಶ್ವವಿದ್ಯಾನಿಲಯದ ಖಾತೆಗೆ ಪಾವತಿಸಿರುವ ಪ್ರವೇಶ ಶುಲ್ಕದ ವಿವರಗಳನ್ನು ಅಗತ್ಯ ದಾಖಲೆಗಳೊಂದಿಗೆ ದಿನಾಂಕ:23.08.2018 ರೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈಗಾಗಲೇ ಉಲ್ಲೇಖ(1), (2) & (3) ರ ಪತ್ರಗಳಲ್ಲಿ ತಿಳಿಸಲಾಗಿತ್ತು. ಆದರೆ ಇನ್ನು ಕೆಲವು ಕಾಲೇಜಿನವರು ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳ ಪ್ರವೇಶಾತಿ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿರುವುದಿಲ್ಲ. ಈಗಾಗಲೇ ಪ್ರವೇಶಾನುಮೋದನೆ ಪ್ರಕ್ರಿಯೆ ಪ್ರಾರಂಭಿಸಲಾಗಿದ್ದು ಈ ಸಂಬಂಧ ತಕ್ಷಣ ಪ್ರವೇಶಾತಿ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿ ಎಲ್ಲಾ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆಗೆ ಹಾಜರುಪಡಿಸಿ ಪ್ರವೇಶಾನುಮೋದನೆ ಪಡೆಯುವಂತೆ ತಿಳಿಸುತ್ತಾ, ಪ್ರವೇಶಾನುಮೋದನೆ ಪಡೆಯದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ಪ್ರಕರಣ (61) ರಲ್ಲಿ ಕೆಳಕಂಡಂತೆ ಉಲ್ಲೇಖಿಸಲಾಗಿದೆ.

**<u>ಪರೀಕ್ಷೆಗಳಿಗೆ ಹಾಜರಾಗಲು ನಿರ್ಬಂಧ</u> : ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯು, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹನಾಗಿರತಕ್ಕದ್ದಲ್ಲ.**

ಆದ್ದರಿಂದ ಪ್ರವೇಶಾತಿ ಪಟ್ಟಿಯನ್ನು ಸಲ್ಲಿಸದ ಕಾಲೇಜುಗಳು ಸದರಿ ಪಟ್ಟಿಯನ್ನು ಸಲ್ಲಿಸುವಂತೆ ಹಾಗೂ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ತಕ್ಷಣ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿ ಪ್ರವೇಶಾನುಮೋದನೆ ಪಡೆಯುವಂತೆ, ತಪ್ಪಿದಲ್ಲಿ ಮುಂದಿನ ಎಲ್ಲಾ ಆಗು-ಹೋಗುಗಳಿಗೆ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತೀರಿ ಎಂಬುದನ್ನು ಈ ಮೂಲಕ ತಮಗೆ ತಿಳಿಸಲಾಗಿದೆ.

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು